## ಕರ್ನಾಟಕ ಸರ್ಕಾರ

ಸಂಖ್ಯೆ: ಸಕನಿ/ಸಿಬ್ಬಂದಿ–8/ಸಿಆರ್–100/2019–20

ಸಮಾಜ ಕಲ್ಯಾಣ ಆಯುಕ್ತರ ಕಛೇರಿ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 18/1/2020

## ಅಧಿಕೃತ ಜ್ಞಾಪನಾ

ವಿಷಯ:– ಸಮಾಜ ಕಲ್ಯಾಣ ಇಲಾಖೆಯ ಜೂನಿಯರ್ ವಾರ್ಡನ್ ವೃಂದದ ಹೈದ್ರಾಬಾದ್–ಕರ್ನಾಟಕ ಸ್ಥಳೀಯ ವೃಂದ, ಉಳಿಕೆ ಮೂಲ ವೃಂದ ಹಾಗೂ ಮೂಲ ವೃಂದ (ಹೈದ್ರಾಬಾದ್–ಕರ್ನಾಟಕ ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದಗಳ ಜಂಟಿ ವೃಂದ) ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ 01–01–2020 ರಲ್ಲಿದ್ದಂತೆ ಪ್ರಕಟಿಸುವ ಬಗ್ಗೆ

ಉಲ್ಲೇಖ:–
1) ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957
2) ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 07 ಸೇಸೇನಿ 96 ದಿನಾಂಕ 16–07–96
3) ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 32 ಸೇಸೇನಿ 03 ದಿನಾಂಕ 10–06–03
4) ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಪಿಎಲ್ಎಕ್ಸ್ ದಿನಾಂಕ 06–11–2013
5) ಸರ್ಕಾರದ ಅಧಿಸೂಚನೆ–I ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ದಿನಾಂಕ 29–01–2014

**********

ಕರ್ನಾಟಕ ಸರ್ಕಾರಿ ನೌಕರರ (ಜೇಷ್ಟತೆ) ನಿಯಮ 1957 ರ ನಿಯಮ 10 ರನ್ವಯ ಪ್ರತಿ ವರ್ಷ ಜೇಷ್ಟತಾ ಪಟ್ಟಿಯನ್ನು ಪ್ರಕಟಿಸಬೇಕಾಗಿರುತ್ತದೆ. ಉಲ್ಲೇಖ (2) & (3) ರ ಸರ್ಕಾರದ ಅಧಿಕೃತ ಜ್ಞಾಪನಾಗಳನ್ವಯ ದಿನಾಂಕ 01–01–2020 ರಲ್ಲಿದ್ದಂತೆ ಜೇಷ್ಟತಾ ಪಟ್ಟಿಯನ್ನು ಪ್ರಕಟಿಸಬೇಕಾಗಿರುತ್ತದೆ.

ಹೈದ್ರಾಬಾದ್–ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದಂತೆ, ಉಲ್ಲೇಖ (4) ಮತ್ತು (5) ರ ಸಿಬ್ಬಂದಿ & ಆಡಳಿತ ಸುಧಾರಣಾ ಇಲಾಖೆರವರ ಅಧಿಸೂಚನೆಗಳನ್ವಯ ಸ್ಥಳೀಯ ವೃಂದ, ಉಳಿಕೆ ಮೂಲ ವೃಂದ ಮತ್ತು ಮೂಲ ವೃಂದ (ಹೈದರಾಬಾದ್–ಕರ್ನಾಟಕ ಪ್ರದೇಶ ಹಾಗೂ ಉಳಿಕೆ ಮೂಲ ವೃಂದದ ಜಂಟಿ ವೃಂದ) ದ ಜೇಷ್ಟತಾ ಪಟ್ಟಿಗಳನ್ನು ಪ್ರತಿ ವೃಂದದಲ್ಲಿ ನಿರ್ವಹಿಸಬೇಕಾಗಿರುತ್ತದೆ.

ಸಮಾಜ ಕಲ್ಯಾಣ ಇಲಾಖೆಯ ಜೂನಿಯರ್ ವಾರ್ಡನ್ ವೃಂದಗಳ ಹೈದ್ರಾಬಾದ್–ಕರ್ನಾಟಕ ಸ್ಥಳೀಯ ವೃಂದ–ಅನುಬಂಧ 1, ಉಳಿಕೆ ಮೂಲ ವೃಂದ–ಅನುಬಂಧ 2 ಹಾಗೂ ಮೂಲ ವೃಂದ (ಹೈದ್ರಾಬಾದ್–ಕರ್ನಾಟಕ ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದಗಳ ಜಂಟಿ ವೃಂದ) ಅನುಬಂಧ–3 ರಲ್ಲಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ 01–01–2020 ರಲ್ಲಿದ್ದಂತೆ ಇಲಾಖಾ ವೆಬ್‌ಸೈಟ್ www.sw.kar.nic.in ನಲ್ಲಿ ಪ್ರಕಟಿಸಿದೆ. ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳನ್ನು ಇ–ಮೇಲ್ ಮೂಲಕ ನಿರ್ದೇಶಕರು, ಪರಿಶಿಷ್ಟ ವರ್ಗಗಳ

ಕಲ್ಯಾಣ ಇಲಾಖೆ, ಡಾ: ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು / ಬುಡಕಟ್ಟುಗಳ ಆಯೋಗ, ಪರೀಕ್ಷಾ ಪೂರ್ವ ತರಬೇತಿ ಸಂಸ್ಥೆ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಎಲ್ಲಾ ಜಿಲ್ಲೆಗಳ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಯೋಜನಾ ಸಮನ್ವಯಾಧಿಕಾರಿಗಳು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಗ್ರೇಡ್-1 & 2, ಸಮಾಜ ಕಲ್ಯಾಣ ಇಲಾಖೆ ರವರುಗಳಿಗೆ ಕಳುಹಿಸಲಾಗಿದೆ.

ಸಂಬಂಧಿಸಿದ ಅಧಿಕಾರಿಗಳು ಇಲಾಖಾ ವೆಬ್‌ಸೈಟ್‌ನಿಂದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಂಡು, ಪ್ರತಿಗಳನ್ನು ಮಾಡಿಸಿ ದಿನಾಂಕ 10-02-2020ರ ಒಳಗಾಗಿ ತಮ್ಮ ಅಧೀನದಲ್ಲಿ ಬರುವ ಸಂಬಂಧಿಸಿದ ಎಲ್ಲಾ ನೌಕರರಿಗೆ ಜಾರಿ ಮಾಡುವುದು. ತದನಂತರ ಸಂಬಂಧಿಸಿದ ಅಧಿಕಾರಿಗಳು ಈ ಕುರಿತು ನೌಕರರಿಂದ ಸ್ವೀಕರಿಸಿದ ಆಕ್ಷೇಪಣೆಗಳನ್ನು ನೌಕರರ ಸೇವಾ ವಹಿಯೊಂದಿಗೆ ಪರಿಶೀಲಿಸಿ ನ್ಯೂನತೆ / ಆಕ್ಷೇಪಣೆಗಳ ಬಗ್ಗೆ ಷರಾ ನಮೂದಿಸಿ ಆಕ್ಷೇಪಣೆಗಳನ್ನು ನಮೂನೆ 'ಡಿ' ರಲ್ಲಿ ಪಟ್ಟಿ ಮಾಡಿ ಹಾಗೂ ನಿವೃತ್ತಿ ಹೊಂದಿದವರು, ಮರಣ ಹೊಂದಿದವರು, ಇಲಾಖೆ ಬಿಟ್ಟಿರುವವರು ಇತ್ಯಾದಿ ವಿವರಗಳನ್ನು ನಮೂದಿಸತಕ್ಕದ್ದು.

ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು / ಬುಡಕಟ್ಟುಗಳ ಆಯೋಗ, ಡಾ: ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಪರೀಕ್ಷಾ ಪೂರ್ವ ತರಬೇತಿ ಸಂಸ್ಥೆ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಎಲ್ಲಾ ಜಿಲ್ಲೆಗಳ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಯೋಜನಾ ಸಮನ್ವಯಾಧಿಕಾರಿಗಳು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಸ್ವೀಕರಿಸಿದ ಆಕ್ಷೇಪಣೆಗಳನ್ನು ಕ್ರೋಢೀಕರಿಸಿ, ದೃಢೀಕರಣದೊಂದಿಗೆ ದಿನಾಂಕ 20-02-2020 ರೊಳಗೆ ಈ ಕಛೇರಿಗೆ ಮುದ್ದಾಂ ಸಲ್ಲಿಸಲು ಸೂಚಿಸಿದೆ. ನಿಗಧಿತ ದಿನಾಂಕದ ನಂತರ ಸ್ವೀಕೃತಗೊಳ್ಳುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

Rapus

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

ಪ್ರತಿಯನ್ನು:-

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು.
3) ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ.
4) ಎಲ್ಲಾ ಜಿಲ್ಲೆಗಳ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
5) ಎಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ.
6) ಎಲ್ಲಾ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ.
7) ಎಲ್ಲಾ ಸಹಾಯಕ ನಿರ್ದೇಶಕರು, ಗ್ರೇಡ್-1 & 2, ಸಮಾಜ ಕಲ್ಯಾಣ ಇಲಾಖೆ.
8) ಸಂಬಂಧಿಸಿದ ನೌಕರರಿಗೆ ಸಂಬಂಧಿಸಿದ ಅಧಿಕಾರಿಗಳ ಮುಖಾಂತರ.
9) ಕಛೇರಿ ಪ್ರತಿ / ಇತರೆ.

## ನಮೂನೆ–ಡಿ

## ಜೂನಿಯರ್ ವಾರ್ಡನ್ ವೃಂದದ ತಾತ್ಕಾಲಿಕ ಜೇಷ್ಠತಾ ಪಟ್ಟಿಗೆ ಆಕ್ಷೇಪಣೆ ಸಲ್ಲಿಸುವ ನಮೂನೆ

| ಕ್ರ. ಸಂ. | ನೌಕರರ ಹೆಸರು ಮತ್ತು ಜೇಷ್ಠತಾ ಸಂಖ್ಯೆ | ಆಕ್ಷೇಪಣೆ | ಷರಾ |
|---|---|---|---|
| | | | |

ಜಂಟಿ ನಿರ್ದೇಶಕರು / ಉಪ ನಿರ್ದೇಶಕರು
/ ಸಹಾಯಕ ನಿರ್ದೇಶಕರು
ಕಛೇರಿ ಮುಖ್ಯಸ್ಥರ ಸಹಿ
ಮೊಹರಿನೊಂದಿಗೆ